# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತಾರನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಗುರುವಾರ, ದಿನಾಂಕ:24ನೇ ಮಾರ್ಚ್, 2022**

**(ಸಮಯ: ಬೆಳಗ್ಗೆ: 10.30 ಗಂಟೆಗೆ)**

***

## 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಇಪ್ಪತ್ತಮೂರನೆಯ ಪಟ್ಟಿ

ಆ) **ತಡೆಹಿಡಿಯಲಾದ ಪ್ರಶ್ನೆಗಳು:**

13ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಅರುಣ ಶಹಾಪುರ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 184 (1505)

13ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಸಿ.ಎಂ. ಇಬ್ರಾಹಿಂ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 186 (1441)

18ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಕೆ.ಎ.ತಿಪ್ಪೇಸ್ವಾಮಿ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 260 (2014)

18ನೇ ಪಟ್ಟಿಯಿಂದ ತಡೆಹಿಡಿಯಲಾದ **ಡಾ. ಕೆ. ಗೋವಿಂದರಾಜು** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 264 (2049)

18ನೇ ಪಟ್ಟಿಯಿಂದ ತಡೆಹಿಡಿಯಲಾದ **ಎಸ್.ರವಿ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 268 (2034)

} ಮಾನ್ಯ ಮುಖ್ಯಮಂತ್ರಿಯವರು

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಇಪ್ಪತ್ತಮೂರನೆಯ ಪಟ್ಟಿ

## 02. ವಿತ್ತೀಯ ಕಾರ್ಯಕಲಾಪಗಳು

**ಶ್ರೀ ಬಸವರಾಜ ಬೊಮ್ಮಾಯಿ (ಮುಖ್ಯಮಂತ್ರಿಗಳು) ಅವರು** : 2021–22ನೇ ಸಾಲಿನ ಪೂರಕ ಅಂದಾಜುಗಳನ್ನು (ಮೂರನೇ ಹಾಗೂ ಅಂತಿಮ ಕಂತು) ಮಂಡಿಸುವುದು.

## 03. ಅರ್ಧ ಗಂಟೆ ಕಾಲಾವಧಿ ಚರ್ಚೆ

01. "ರಾಜ್ಯದಲ್ಲಿರುವ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ಅಗ್ನಿ ಸುರಕ್ಷತೆ" ಕುರಿತು ದಿನಾಂಕ:07.03.2022ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:139 (1176)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಕೆ. ಹರೀಶ್ ಕುಮಾರ್** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

02. ಕೋಲಾರ ಜಿಲ್ಲೆಯ ಕೆ.ಜಿ.ಎಫ್.ನಲ್ಲಿರುವ ಬೆಮಲ್ ಕಾರ್ಖಾನೆಯನ್ನು ಖಾಸಗೀಕರಣಗೊಳಿಸುತ್ತಿರುವ ಕುರಿತು ದಿನಾಂಕ:08.03.2022ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:159(1313)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಗೋವಿಂದರಾಜು** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

03. ಬೆಂಗಳೂರು ನಗರದ ಗುರು ರಾಘವೇಂದ್ರ ಸಹಕಾರ ಬ್ಯಾಂಕ್ ಮತ್ತು ವಶಿಷ್ಠ ಸೌಹಾರ್ದ ಸಹಕಾರ ಬ್ಯಾಂಕ್‌ನ ಅವ್ಯವಹಾರ ಕುರಿತು ದಿನಾಂಕ:15.02.2022ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:10 (13)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಯು.ಬಿ. ವೆಂಕಟೇಶ್** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

## 04. ಇಲಾಖಾ ನೀತಿ ಹಾಗೂ ಕಾರ್ಯಚರಣೆ ಮೇಲಿನ ಚರ್ಚೆ

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ನೀತಿ ಹಾಗೂ ಕಾರ್ಯಚರಣೆಯ ಮೇಲಿನ ಚರ್ಚೆ

## 05. ಗಮನ ಸೆಳೆಯುವ ಸೂಚನೆಗಳು

01. **ಶ್ರೀ ಮುನಿರಾಜು ಗೌಡ ಪಿ.ಎಂ.** ಅವರು ಬೆಂಗಳೂರು ದಕ್ಷಿಣ ತಾಲ್ಲೂಕಿನ ಕೆಂಬತ್ತಳ್ಳಿ ಸರ್ವೆ ನಂ.85 ನೆಲ್ಲೂ ರೆಡ್ಡಿ ಕ್ವಾರಿ ಪ್ರದೇಶದಲ್ಲಿ ಅನಧಿಕೃತ ಜೈವಿಕ ತ್ಯಾಜ್ಯದ ವಿಲೇವಾರಿಯಿಂದ ಸುತ್ತಮುತ್ತಲಿನ ಗ್ರಾಮಗಳಲ್ಲಿ ವಾಸಿಸುತ್ತಿರುವ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಕುರಿತು ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

02. **ಶ್ರೀ ಮರಿತಿಬ್ಬೇಗೌಡ** ಅವರು ಮಂಡ್ಯ ವೈದ್ಯಕೀಯ ವಿಜ್ಞಾನ ಶಿಕ್ಷಣ ಸಂಸ್ಥೆಯಲ್ಲಿ ಅಸೋಸಿಯೇಟ್ ಪ್ರೊಫೆಸರ್‌ಗಳಿಗೆ ನಿವೃತ್ತಿ ವೇತನವನ್ನು ಮಂಜೂರು ಮಾಡುವ ಕುರಿತು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

03. **ಶ್ರೀ ಸಿ.ಎನ್. ಮಂಜೇಗೌಡ** ಅವರು ಮೈಸೂರು ನಗರದಲ್ಲಿ ಚಿತ್ರ ನಗರಿ(ಫಿಲಂ ಸಿಟಿ) ನಿರ್ಮಾಣಕ್ಕೆ ಸರ್ಕಾರದಿಂದ ವಿಳಂಬವಾಗುತ್ತಿರುವ ಕುರಿತು ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

04. **ಶ್ರೀ ಸಲೀಂ ಅಹಮದ್** ಅವರು ಕರ್ನಾಟಕದ ಜೀವ ನದಿಗಳಲ್ಲಿ ಒಂದಾಗಿರುವ ಮಹಾದಾಯಿ, ಕಳಸಾ-ಬಂಡೂರಿ ನಾಲಾ ಜೋಡಣೆ ಕಾಮಗಾರಿ ಯೋಜನೆ ವಿಳಂಬವಾಗುತ್ತಿರುವ ಕುರಿತು ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

೦೫. **ಶ್ರೀ ಎಸ್.ರುದ್ರೇಗೌಡ** ಅವರು ಕರ್ನಾಟಕ ಲೋಕಸೇವಾ ಆಯೋಗದಿಂದ ನಡೆಯುವ ನೇಮಕಾತಿ ಪ್ರಕ್ರಿಯೆಯಲ್ಲಿ ವ್ಯಕ್ತಿತ್ವ ಪರೀಕ್ಷೆಯ ಅಂಕಗಳನ್ನು ಕಡಿತಗೊಳಿಸಿರುವ ಕುರಿತು ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

## 06. ನಿಯಮ 330ರ ಮೇರೆಗೆ

೦1. **ಶ್ರೀಯುತರುಗಳಾದ ಎನ್.ರವಿಕುಮಾರ್, ಯು.ಬಿ.ವೆಂಕಟೇಶ್, ದಿನೇಶ್ ಗೂಳಿಗೌಡ ಹಾಗೂ ಡಿ.ಎಸ್. ಅರುಣ್** ಅವರುಗಳು ಕರ್ನಾಟಕ ಪರೀಕ್ಷಾ ಪ್ರಾಧಿಕಾರದಲ್ಲಿ ನಡೆಯುತ್ತಿರುವ ಅಕ್ರಮಗಳ ಕುರಿತು ಪ್ರಸ್ತಾಪಿಸುವುದು.

೦೨. **ಶ್ರೀಯುತರುಗಳಾದ ಕೆ.ಎ. ತಿಪ್ಪೇಸ್ವಾಮಿ, ಕೆ.ಟಿ. ಶ್ರೀಕಂಠೇಗೌಡ, ಗೋವಿಂದರಾಜು, ಎಸ್.ಎಲ್. ಭೋಜೇಗೌಡ ಹಾಗೂ ಸೂರಜ್ ರೇವಣ್ಣ** ಅವರುಗಳು ಕರ್ನಾಟಕ ನಾಗರೀಕ ಸೇವಾ ನಿಯಮ 2021ಕ್ಕೆ ತಿದ್ದುಪಡಿ ತರಲು ಸರ್ಕಾರವು ಕರ್ನಾಟಕ ಲೋಕಸೇವಾ ಆಯೋಗದೊಂದಿಗೆ ಸಮಾಲೋಚಿಸದೇ ಕರಡು ಅಧಿಸೂಚನೆಯನ್ನು ಹೊರಡಿಸಿರುವುದರ ಕುರಿತು ಪ್ರಸ್ತಾಪಿಸುವುದು.

೦೩. **ಶ್ರೀಯುತರುಗಳಾದ ಹೆಚ್.ಎಂ. ರಮೇಶ್‌ಗೌಡ, ನಸೀರ್ ಅಹ್ಮದ್, ಎನ್. ರವಿಕುಮಾರ್, ಎಂ.ಎಲ್. ಅನಿಲ್ ಕುಮಾರ್, ಹೆಚ್.ಎಸ್. ಗೋಪಿನಾಥ್** ಹಾಗೂ ಇತರರು ಬೆಂಗಳೂರು ಗ್ರಾಮಾಂತರ ಜಿಲ್ಲೆ ದೇವನಹಳ್ಳಿ ತಾಲ್ಲೂಕು, ಕುಂದಾಣ ಹೋಬಳಿಯಲ್ಲಿನ ಸರ್ಕಾರಿ ಗೋಮಾಳ ಸ್ವತ್ತನ್ನು ಸುಳ್ಳು ದಾಖಲಾತಿ ಸೃಷ್ಟಿಸಿ ಅಕ್ರಮವಾಗಿ ಖಾತೆ ವರ್ಗಾಯಿಸಿಕೊಂಡಿರುವ ಕುರಿತು ಪ್ರಸ್ತಾಪಿಸುವುದು.

೦4. **ಶ್ರೀಯುತರುಗಳಾದ ಮರಿತಿಬ್ಬೇಗೌಡ, ನಸೀರ್ ಅಹ್ಮದ್, ಪಿ.ಆರ್. ರಮೇಶ್, ಎಸ್. ರವಿ, ಸಲೀಂ ಅಹಮದ್** ಹಾಗೂ ಇತರರು ಬೆಂಗಳೂರಿನ ಟರ್ಫ್ ಕ್ಲಬ್ ಸಂಸ್ಥೆಯು ಸರ್ಕಾರಕ್ಕೆ ಪಾವತಿಸಬೇಕಾಗಿರುವ ತೆರಿಗೆ ಹಾಗೂ ಬಾಡಿಗೆ ಮೊತ್ತವನ್ನು ಬಾಕಿ ಉಳಿಸಿಕೊಂಡಿರುವುದರಿಂದ ಸದರಿ ಕ್ಲಬ್‌ನ ಪರವಾನಗಿಯನ್ನು ರದ್ದುಪಡಿಸುವ ಕುರಿತು ಪ್ರಸ್ತಾಪಿಸುವುದು.

೦೫. **ಶ್ರೀಯುತರುಗಳಾದ ಮಂಜುನಾಥ್ ಭಂಡಾರಿ, ಬಿ.ಕೆ. ಹರಿಪ್ರಸಾದ್, ಮಾನ್ಯ ವಿರೋಧ ಪಕ್ಷದ ನಾಯಕರು, ಡಾ. ಕೆ. ಗೋವಿಂದರಾಜ್, ಎಸ್.ಎಲ್.ಭೋಜೇಗೌಡ, ಪ್ರತಾಪ್ ಸಿಂಹ ನಾಯಕ್** ಹಾಗೂ ಇತರರು ರಾಜ್ಯದ ಕರಾವಳಿ ಭಾಗದಲ್ಲಿನ ಜಾನಪದ ಕ್ರೀಡೆಯಾದ ಕಂಬಳ ಕ್ಷೇತ್ರಕ್ಕೆ ಸರಿಯಾದ ಪ್ರೋತ್ಸಾಹವಿಲ್ಲದೆ ತನ್ನ ಅಸ್ತಿತ್ವವನ್ನು ಕಳೆದುಕೊಳ್ಳುತ್ತಿರುವ ಕುರಿತು ಪ್ರಸ್ತಾಪಿಸುವುದು.

೦೬. **ಶ್ರೀ ಡಿ.ಎಸ್.ಅರುಣ್** ಅವರು ಟ್ರೇಡ್ ಪರವಾನಗಿ ಶುಲ್ಕ ವಸೂಲಾತಿಯಲ್ಲಿ ಗೊಂದಲಗಳಿರುವ ಕುರಿತು ಪ್ರಸ್ತಾಪಿಸುವುದು.

೦೭. **ಶ್ರೀಯುತರುಗಳಾದ ಕೆ.ಟಿ. ಶ್ರಿಕಂಠೇಗೌಡ, ಕೆ.ಎ. ತಿಪ್ಪೇಸ್ವಾಮಿ ಹಾಗೂ ಎಸ್.ಎಲ್. ಭೋಜೇಗೌಡ** ಅವರುಗಳು ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ ಬಳಕೆಯಾಗದೆ ಉಳಿದಿರುವ ಅನುದಾನವನ್ನು ಹಿಂಪಡೆದಿರುವ ಕುರಿತು ಪ್ರಸ್ತಾಪಿಸುವುದು.

..4..

## 07. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಚರ್ಚೆ

| | | |
|---|---|---|
| 1. | ಶ್ರೀ ಕೆ. ಎ. ತಿಪ್ಪೇಸ್ವಾಮಿ,<br>ಶ್ರೀ ಕೆ.ಟಿ.ಶ್ರೀಕಂಠೇಗೌಡ ಮತ್ತು<br>ಶ್ರೀ ಎಸ್.ಎಲ್ ಭೋಜೇಗೌಡ ಅವರುಗಳು | ಬಿಎಂಆರ್‌ಸಿಎಲ್‌ಗೆ ಭೂಸ್ವಾಧೀನ ಪ್ರಕ್ರಿಯೆಯಲ್ಲಿರುವ ಜಮೀನುಗಳನ್ನು ನಂದಿ ಇನ್‌ಫ್ರಾಸ್ಟ್ರಕ್ಚರ್ ಕಾರಿಡಾರ್ ಎಂಟರ್‌ಪ್ರೈಸಸ್ ಸಂಸ್ಥೆಗೆ ಸೇರಿದ ಭೂಮಿಯನ್ನು ಕೆ.ಐ.ಎ.ಡಿ.ಬಿ. ವತಿಯಿಂದ ಪಡೆದಿರುವ ಕುರಿತು ಮುಂದುವರೆದ ಚರ್ಚೆ ಹಾಗೂ ಸರ್ಕಾರದಿಂದ ಉತ್ತರ. |
| 2. | ಶ್ರೀ ಬಿ.ಕೆ. ಹರಿಪ್ರಸಾದ್, ಮಾನ್ಯ ವಿರೋಧ ಪಕ್ಷದ ನಾಯಕರು, ಶ್ರೀ ಪ್ರಕಾಶ್ ಕೆ. ರಾಥೋಡ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು, ಶ್ರೀ ಅಲ್ಲಂ ವೀರಭದ್ರಪ್ಪ, ಶ್ರೀ ಆರ್.ಬಿ.ತಿಮ್ಮಾಪೂರ, ಶ್ರೀ ಸಲೀಂ ಅಹಮದ್, ಶ್ರೀ ಎಸ್.ರವಿ, ಶ್ರೀ ಯು.ಬಿ. ವೆಂಕಟೇಶ್ ಹಾಗೂ ಶ್ರೀಮತಿ ವೀಣಾ ಅಚ್ಚಯ್ಯ ಅವರುಗಳು | ರಾಜ್ಯದ ಕಾನೂನು ಹಾಗೂ ಸಮಾಜ ರಕ್ಷಕರಾಗಿರುವ ಕೆಲವು ಪೊಲೀಸರು ಹಣ ಸಂಪಾದನೆಗಾಗಿ ಭ್ರಷ್ಟಾಚಾರದಲ್ಲಿ ತೊಡಗಿರುವ ಕುರಿತು. |

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**